Teachingninja.in

Latest Govt Job updates

Private Job updates

Free Mock tests available

Visit - teachingninja.in

# KSP SI

## Previous Year Paper

### Paper-I 29 Jan, 2023

Teachingninja.in

# Question Paper - I

**Maximum Marks : 50** **Time : 60 Minutes**

**ಗರಿಷ್ಠ ಅಂಕಗಳು : 50** **ಸಮಯ : 60 ನಿಮಿಷಗಳು**

**I. Write an essay on any one of the following topics in not more than 600 words :** **30**

**ಕೆಳಕಂಡ ಯಾವುದಾದರೂ ಒಂದು ವಿಷಯದ ಬಗ್ಗೆ 600 ಪದಗಳಿಗೆ ಮೀರದಂತೆ ಪ್ರಬಂಧ ಬರೆಯಿರಿ.**

(a) Role of media in woman's safety

ಮಹಿಳೆಯರ ಸುರಕ್ಷತೆಯಲ್ಲಿ ಮಾಧ್ಯಮದ ಪಾತ್ರ

(b) Uniform Civil Code – A Constitutional Mandate

ಏಕರೂಪ ನಾಗರಿಕ ಸಂಹಿತೆ – ಸಂವಿಧಾನಾತ್ಮಕ ಆದೇಶ

(c) Contract farming versus Corporate farming

ಗುತ್ತಿಗೆ ಕೃಷಿ ವಿರುದ್ಧ ಕಾರ್ಪೋರೇಟ್ ಕೃಷಿ

(d) Internal National Security threats of India

ಭಾರತದ ಆಂತರಿಕ ರಾಷ್ಟ್ರೀಯ ಭದ್ರತಾ ಬೆದರಿಕೆಗಳು

(e) Composite culture of India

ಭಾರತದ ಸಂಯೋಜಿತ ಸಂಸ್ಕೃತಿ

**II. Translate the following paragraph from English to Kannada :** **10**

**ಈ ಕೆಳಕಂಡ ಪ್ಯಾರಾವನ್ನು ಆಂಗ್ಲ ಭಾಷೆಯಿಂದ ಕನ್ನಡ ಭಾಷೆಗೆ ಭಾಷಾಂತರಿಸಿ.**

There is a lot of stress all around us these days. Most people complain about problems at office, issues in relationships and the growing competition in various fields. People are so engrossed in dealing with these issues that they don't see the real beauty of life. There is so much more to life than these things. In fact, if we look at life closely, we will realize how beautiful it is. God has given us an abundance of everything. This is evident when we look at the nature. The trees, plants, rivers and sunlight – everything is in abundance and so is the energy that resides within us. This is the beauty of life.



Teachingninja.in

However, this is not to say that life is a bed of roses. It is not that problems and concerns of people are not genuine. The rich, the poor, the educated, the uneducated, the beautiful and the not so beautiful – everyone has his/her share of problems. Life is not easy for anyone. However, we need to understand that this is how life is. If everything came easy we would not really value it. Life is beautiful in its own way and we should look for reasons to enjoy it and embrace its beauty amid the issues we are dealing with.

**III. Translate the following paragraph from Kannada to English : 10**

**ಈ ಕೆಳಕಂಡ ಪ್ಯಾರಾವನ್ನು ಕನ್ನಡದಿಂದ ಇಂಗ್ಲೀಷ್ ಭಾಷೆಗೆ ಅನುವಾದಿಸಿ.**

ಒಬ್ಬ ರೈತನಿಗೆ ಬಹಳ ವಯಸ್ಸಾಗಿತ್ತು. ಅವನಿಗೆ ಹೊಲದಲ್ಲಿ ಕೆಲಸ ಮಾಡಲು ಸಾಧ್ಯವಾಗುತ್ತಿರಲಿಲ್ಲ. ಹೀಗಾಗಿ ಸದಾ ವರಾಂಡದಲ್ಲೇ ಕುಳಿತುಕೊಂಡು ದಿನ ಕಳೆಯುತ್ತಿದ್ದನು. ಅವನ ಮಗ ಯಾವಾಗಲೂ ಹೊಲದಲ್ಲಿ ಕೆಲಸ ಮಾಡುತ್ತಿದ್ದನು. ಮಗನು ಯಾವ ಸಮಯದಲ್ಲಿ ನೋಡಿದರೂ ಅವರ ತಂದೆ ಅಲ್ಲಿಯೇ ಕುಳಿತಿರುವುದು ಕಾಣುತ್ತಿತ್ತು.

"ಇವರು ಇನ್ನು ಮುಂದೆ ಯಾವುದೇ ಕೆಲಸಕ್ಕೂ ಉಪಯೋಗಕ್ಕೆ ಬರುವುದಿಲ್ಲ" ಎಂದು ಮಗನು ಭಾವಿಸಿದನು. "ಇನ್ನು ಮುಂದೆ ಇವರಿಂದ ಏನೂ ಮಾಡಲು ಸಾಧ್ಯವಿಲ್ಲ" ಎಂದು ತಿಳಿಯಿತು. ಇದರಿಂದ ಮಗನಿಗೆ ತುಂಬಾ ನಿರಾಸೆಯಾಯಿತು.

ಒಂದು ದಿನ ಮಗನು ಒಂದು ದೊಡ್ಡದಾದ ಮರದ ಶವದ ಪೆಟ್ಟಿಗೆಯನ್ನು ತಯಾರು ಮಾಡಿಸಿದನು. ಮತ್ತು ಅದನ್ನು ವರಾಂಡದಲ್ಲಿ ಎಳೆದು ತಂದು ಅವರ ತಂದೆಗೆ ಒಳಗೆ ಮಲಗಿಕೊಳ್ಳಲು ಹೇಳಿದನು. ಏನೂ ಮಾತನಾಡದೇ ಅವರ ತಂದೆ ಅದರ ಮೇಲೆ ಏರಿ ಒಳಗೆ ಮಲಗಿದರು. ನಂತರ ಮಗನು ಆ ಶವದ ಪೆಟ್ಟಿಗೆಯ ಮುಚ್ಚಳವನ್ನು ಮುಚ್ಚಿ, ಅದನ್ನು ಹೊಲದ ಕೊನೆಯಲ್ಲಿ ಇರುವ ದೊಡ್ಡದಾದ ಪ್ರಪಾತಕ್ಕೆ ಎಳೆದು ತರುತ್ತಿದ್ದನು. ಆ ಪ್ರಪಾತ ಸಮೀಪಿಸುತ್ತಿದ್ದಂತೆ ಶವದ ಪೆಟ್ಟಿಗೆಯ ಒಳಗಿನಿಂದ ನಿಧಾನವಾಗಿ ಮುಚ್ಚಳ ಸರಿದಾಡಲಾರಂಭಿಸಿತು. ಮಗನು ಆ ಮುಚ್ಚಳವನ್ನು ತೆರೆದು ನೋಡಿದನು. ಅದರ ಒಳಗೆ ಅವರ ತಂದೆ ಪ್ರಶಾಂತವಾಗಿ ಮಲಗಿದ್ದರು. ಅವರ ತಂದೆ ಮಗನ ಕಡೆ ನೋಡಿ "ಮಗನೇ ನೀನು ನನ್ನನ್ನು ಪ್ರಪಾತದಿಂದ ಕೆಳಗೆ ತಳ್ಳಲು ಕರೆಯೊದ್ಯುತ್ತಿದ್ದೀಯ ಅಂತ ನನಗೆ ಗೊತ್ತಿದೆ. ಆದರೆ ನೀನು ಹಾಗೆ ಮಾಡುವುದಕ್ಕಿಂತ ಮೊದಲು ನಾನು ನಿನಗೆ ಒಂದು ಸಲಹೆಯನ್ನು ನೀಡಲೇ ?" ಎಂದು ಕೇಳಿದನು. "ಏನದು .. ?" ಎಂದು ಮಗನು ಕೇಳಿದನು. "ನೀನು ನನ್ನನ್ನು ಪ್ರಪಾತದಿಂದ ಎಸೆಯಬೇಕು ಎಂದು ಬಯಸಿದರೆ ನನ್ನನ್ನು ಎಸೆದು ಬಿಡು. ಆದರೆ ಈ ಅತ್ಯುತ್ತಮವಾದ ಮರದ ಶವದ ಪೆಟ್ಟಿಗೆಯನ್ನು ಉಳಿಸಿ ಜೋಪಾನವಾಗಿ ಕಾಪಾಡು. ಮುಂದೆ ನಿನ್ನ ಮಕ್ಕಳು ಇದನ್ನು ಬಳಸಲು ಉಪಯುಕ್ತವಾಗುತ್ತದೆ !" ಎಂದು ಹೇಳಿದನು ಆ ವೃದ್ಧ ತಂದೆ. ಆಗ ಮಗನಿಗೆ ತನ್ನ ತಪ್ಪಿನ ಅರಿವಾಯಿತು. ತಂದೆಯ ಕ್ಷಮೆ ಕೇಳಿ, ಗೌರವದಿಂದ ತಂದೆಯನ್ನು ಮನೆಗೆ ವಾಪಸ್ ಕರೆದುಕೊಂಡು ಹೋದನು.



Teachingninja.in